ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಮಾಂಜ್ರಾ ಸರಣಿ ಬ್ಯಾರೇಜ್ ಕಾಮಗಾರಿಯ ಲೋಪದೋಷ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):-

370(465) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯ ಮಾಂಜ್ರಾ ಸರಣಿ ಬ್ರ್ಯಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ, ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ಸ್ಪಷ್ಟ ಮಾಹಿತಿ ಒದಗಿಸುವುದು;

(ಆ) ನಾಲ್ಕು ಬ್ಯಾರೇಜ್‌ಗಳ ನಿರ್ಮಾಣಕ್ಕೆ ಖರ್ಚು ಮಾಡಲಾಗಿರುವ ಹಣ ಎಷ್ಟು ; ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿಗಳು ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಮಾಹಿತಿ ನೀಡುವುದು)